6

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಡಾ : ಚಂದ್ರಶೇಖರ್ ಬಿ.ಪಾಟೀಲ್ |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **331** |
| ಉತ್ತರಿಸಬೇಕಾದ ದಿನಾಂಕ | : | 21.12.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ವಸತಿ ನಿಗಮದ ವ್ಯಾಪ್ತಿಯಲ್ಲಿ ಬರುವ ಇಲಾಖೆಗಳು ಮನೆಗಳನ್ನು ಬ್ಲಾಕ್ ಮಾಡಿ ತಡೆ ಹಿಡಿದಿದ್ದು, ಸುಮಾರು 10,000 ಸಾವಿರ ಮೇಲ್ಪಟ್ಟ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಮಾರ್ಗಸೂಚಿಗಳನ್ವಯ ನಿಗಮದಿಂದ ಕಾಮಗಾರಿ ಆದೇಶ ನೀಡಿದ 90 ದಿನಗಳೊಳಗಾಗಿ ಫಲಾನುಭವಿಯು ತನ್ನ ಮನೆಯ ಕಾಮಗಾರಿಯನ್ನು ಪ್ರಾರಂಭಿಸಬೇಕಿದ್ದು, ಒಂದು ವರ್ಷದೊಳಗಾಗಿ ಮನೆಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ. ಹೀಗೆ ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪ್ರಾರಂಭ ಮಾಡಿಕೊಳ್ಳದ 2013-2014 ರಿಂದ 2018-2019 ನೇ ಸಾಲಿನ ಮನೆಗಳನ್ನು ಮಾರ್ಗಸೂಚಿಗಳನ್ವಯ ಬ್ಲಾಕ್ ಮಾಡಲಾಗಿತ್ತು.<br><br>ಜನ ಪ್ರತಿನಿಧಿಗಳ ಕೋರಿಕೆಯಂತೆ ಸರ್ಕಾರವು ದಿನಾಂಕ:14.02.2020 ರಂದು ಆದೇಶ ಹೊರಡಿಸಿ ವಿವಿಧ ವಸತಿ ಯೋಜನೆಗಳಡಿ ನಿಗದಿತ ಸಮಯದಲ್ಲಿ ಪ್ರಾರಂಭಗೊಳ್ಳದೇ ಬ್ಲಾಕ್ ಆಗಿದ್ದ ಮನೆಗಳನ್ನು ತೆರವುಗೊಳಿಸಿ, ವಾಸ್ತವವಾಗಿ ಪ್ರಾರಂಭವಾಗಿರುವ ಮನೆಗಳ ಛಾಯಾ ಚಿತ್ರಗಳನ್ನು ಜಿಪಿಎಸ್ ಗೆ ಅಳವಡಿಸಲು ಒಂದೂವರೆ ತಿಂಗಳ ಕಾಲಾವಕಾಶವನ್ನು ನೀಡಲಾಗಿತ್ತು. ಈ ಅವಧಿಯಲ್ಲಿ ಜಿ.ಪಿ.ಎಸ್. ಮಾಡಿರುವ ಮನೆಗಳನ್ನು ಪ್ರಗತಿಗೆ ಪರಿಗಣಿಸಿ ಉಳಿದ ಎಲ್ಲಾ ಮನೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ವಇ 12 ಹೆಚ್ಎಹೆಚ್ 2020, ದಿನಾಂಕ:19.05.2020 ರನ್ವಯ ರದ್ದುಪಡಿಸಲಾಗಿರುತ್ತದೆ.<br><br>ಸದರಿ ಆದೇಶದನ್ವಯ ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು 3912 ಮನೆಗಳನ್ನು ರದ್ದುಪಡಿಸಲಾಗಿರುತ್ತದೆ.<br><br>ಅಲ್ಲದೆ ರಾಜ್ಯದ ವಿವಿಧ ಕಡೆಗಳಲ್ಲಿ 2015-16 ರಿಂದ 2021-22 ನೇ ಸಾಲಿನ ವಸತಿ ಯೋಜನೆಗಳಡಿ ಅನುದಾನ ದುರುಪಯೋಗವಾಗಿದೆ ಎಂದು ಬಂದ ಹಲವಾರು ದೂರುಗಳು ಹಾಗೂ ನೇಮ್ ಡೂಪ್ಲಿಕೇಟ್, ಆಧಾರ್ ಡೂಪ್ಲಿಕೇಟ್ SECC ಸಮೀಕ್ಷೆಯಲ್ಲಿ ಹೆಸರು ಬದಲಾವಣೆ ಹೀಗೆ ಹಲವಾರು ಕಾರಣಗಳ ಸಂಬಂಧ ಫಲಾನುಭವಿಗಳ ಅನುದಾನ ಬಿಡುಗಡೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. ಅದರಂತೆ ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಒಟ್ಟು 10,023 ಮನೆಗಳನ್ನು ತಡೆಹಿಡಿಯಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಬ್ಲಾಕ್ ಮಾಡಿ ತಡೆಹಿಡಿದ ಮನೆಗಳಿಗೆ ಹಣ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; | ವಿವಿಧ ವಸತಿ ಯೋಜನೆಗಳಡಿ ಮನೆ ಪ್ರಾರಂಭ ಮಾಡಿಕೊಳ್ಳದೇ ರದ್ದಾದ ಮನೆಗಳ ಫಲಾನುಭವಿಗಳನ್ನು 2021-22 ನೇ ಸಾಲಿನಲ್ಲಿ ನೀಡಲಾಗಿರುವ ಹೊಸ ಮನೆಗಳ ಗುರಿಯಲ್ಲಿ ಮರು ಆಯ್ಕೆಗೆ ನಿಯಮಾನುಸಾರ ಪರಿಗಣಿಸಲು ಸರ್ಕಾರದ ಆದೇಶ ಸಂಖ್ಯೆ: ವಇ 11 ಹೆಚ್ಎಎಂ 2022, ದಿನಾಂಕ:18.02.2022 ರಲ್ಲಿ ಅನುಮೋದನೆಯನ್ನು ನೀಡಿದೆ. |
| ಇ) | ಬ್ಲಾಕ್ ಮಾಡಿ ತಡೆಹಿಡಿದ ಮನೆ ತೆರವುಗೊಳಿಸಿ ಹಣ | |

| | | |
|---|---|---|
| | ಬಿಡುಗಡೆ ಮಾಡಲಾಗುವುದು ಯಾವಾಗ ? | ತಾತ್ಕಾಲಿಕವಾಗಿ ಹಲವಾರು ಕಾರಣಗಳ ಸಂಬಂಧ ಅನುದಾನ ಬ್ಲಾಕ್ ಆಗಿರುವ ಮನೆಗಳಿಗೆ ಅನುದಾನ ಬಿಡುಗಡೆ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುತ್ತಿದೆ.<br>• ನೇಮ್ ಡೂಪ್ಲಿಕೇಟ್, ಆಧಾರ್ ಡೂಪ್ಲಿಕೇಟ್ ಪ್ರಕರಣಗಳಲ್ಲಿ ಆಯಾ ಜಿಲ್ಲಾಧಿಕಾರಿ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರ ಹಂತದಲ್ಲಿಯೇ ಪರಿಶೀಲಿಸಿ ಸರಿಪಡಿಸಲು ಅವಕಾಶ ಕಲ್ಪಿಸಿದ್ದು, ಶಿಫಾರಸ್ಸುಗೊಂಡ ಪ್ರಕರಣಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.<br>• ದೂರುಗಳ ಸಂಬಂಧ ಬ್ಲಾಕ್ ಆಗಿರುವ ಮನೆಗಳನ್ನು ತೆರವುಗೊಳಿಸಲು ಆಯಾ ಜಿಲ್ಲಾಧಿಕಾರಿ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮನೆಗಳ ಭೌತಿಕ ತಪಾಸಣೆ ನಡೆಸಿ ಅರ್ಹವೆಂದು ಶಿಫಾರಸ್ಸು ಮಾಡಿದ್ದಲ್ಲಿ ನಿಯಮಾನುಸಾರ ಪರಿಗಣಿಸಿ ಬ್ಲಾಕ್ ತೆರವುಗೊಳಿಸಿ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುತ್ತದೆ.<br>• ಉಳಿದಂತೆ ಪ್ರಧಾನ ಮಂತ್ರಿ ಅವಾಸ್ ಯೋಜನೆ(ಗ್ರಾ)ರಡಿ SECC ಸಮೀಕ್ಷೆಯಲ್ಲಿ ಹೆಸರು ಬದಲಾವಣೆಯಿಂದ ಬ್ಲಾಕ್ ಆಗಿರುವ ಮನೆಗಳ ಸಂಬಂಧ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ :ವಇ 514 ಹೆಚ್ಎಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು